ಮೇಲುಕೋಟೆ ದೇವಾಲಯದ ಅಭಿವೃದ್ಧಿ

2414 (3117) : ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಇತಿಹಾಸ ಪ್ರಸಿದ್ಧವಾದ ಹಾಗೂ ಧಾರ್ಮಿಕ ಮಹತ್ವವುಳ್ಳ ಮೇಲುಕೋಟೆಯಲ್ಲಿನ ದೇವಾಲಯದ ಅಭಿವೃದ್ಧಿ ಹಾಗೂ ಇಲ್ಲಿಗೆ ಆಗಮಿಸುವ ಭಕ್ತವೃಂದಕ್ಕೆ ಸೌಲಭ್ಯ ದೊರಕಿಸುವ ದಿಶೆಯಲ್ಲಿ ಸರ್ಕಾರವು ಕಾರ್ಯಕ್ರಮವನ್ನೇನಾದರೂ ರೂಪಿಸಿದೆಯೇ;

ಆ) ರೂಪಿಸಿದ್ದಲ್ಲಿ, ಅದರ ವಿವರಗಳೇನು?

ಶ್ರೀಮತಿ ಸುಮಾವಸಂತ್ (ಮುಜರಾಯಿ ರಾಜ್ಯ ಸಚಿವರು):

ಅ) ಹೌದು, ಕಾರ್ಯಕ್ರಮ ರೂಪಿಸಲು ಕ್ರಮ ಕೈಗೊಳ್ಳಲಾಗಿದೆ.

ಆ) ಮೇಲುಕೋಟೆಗೆ ಬರುವ ಭಕ್ತವೃಂದಕ್ಕೆ ಈ ಕೆಳಕಂಡ ಸೌಲಭ್ಯವನ್ನು ದೊರಕಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

1. ಭಕ್ತಾದಿಗಳು ಕುಡಿಯುವ ನೀರಿನ ವ್ಯವಸ್ಥೆ ಹಾಗೂ ತಂಗಲು ವಸತಿ ಗೃಹ ನಿರ್ಮಾಣ ಯೋಜನೆ.

2. ಕೊಳಗಳ ಹಾಗೂ ಇದಕ್ಕೆ ಸೇರಿದ ಚಿಕ್ಕ ದೇವಾಲಯಗಳ ದುರಸ್ಥಿ, ಜೀರ್ಣೋದ್ಧಾರ ಕಾಮಗಾರಿಗಳು.

3. ರಾಜ್ಯ ಪುರಾತತ್ವ ಇಲಾಖೆಗೆ ಸೇರಿರುವ ಶ್ರೀ ಯೋಗನರಸಿಂಹ ದೇವಾಲಯ ದುರಸ್ಥಿ ಕಾರ್ಯವನ್ನು ರಾಜ್ಯ ಪುರಾತತ್ವ ಇಲಾಖೆಯ ಸಹಯೋಗದೊಂದಿಗೆ ಕೈಗೆತ್ತಿಕೊಳ್ಳಲು ಕ್ರಮ ಜರುಗಿಸಲಾಗುತ್ತಿದೆ.

ಬೆಂಗಳೂರು ಮೈಸೂರು ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಪರಿವರ್ತಿಸುವುದು

2415 (3118) : ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿನ ಪ್ರಮುಖ ಹೆದ್ದಾರಿಗಳಲ್ಲಿ ಒಂದಾದ ಬೆಂಗಳೂರು-ಮೈಸೂರು ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೆ ಏರಿಸುವ ಅವಶ್ಯಕತೆಯನ್ನು ಸರ್ಕಾರವು ಮನಗಂಡಿದೆಯೇ;

ಆ) ಹಾಗಿದ್ದಲ್ಲಿ, ಈ ದಿಶೆಯಲ್ಲಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ) ಮನಗಂಡಿದೆ.

ಆ) ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಆದಾಗ್ಯೂ ಈ ರಸ್ತೆಯಲ್ಲಿನ ವಾಹನ ಸಂಚಾರ ಸಾಂದ್ರತೆಯನ್ನು ಗಮನದಲ್ಲಿಟ್ಟುಕೊಂಡು ಇದನ್ನು ಹಾಲಿ ಇರುವ ಎರಡು ಪಥದ ರಸ್ತೆಯಿಂದ ನಾಲ್ಕು ಪಥದ ರಸ್ತೆಯನ್ನಾಗಿ ಪರಿವರ್ತಿಸಲು ಉದ್ದೇಶಿಸಿದ್ದು, ಮೊದಲನೆಯ ಹಂತದಲ್ಲಿ ಬೆಂಗಳೂರಿನಿಂದ ಮದ್ದೂರು ವರೆಗಿನ ಭಾಗವನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ಮತಿಯಿಂದ ಕೈಗೊಳ್ಳುವ ಪ್ರಕ್ರಿಯೆ ಪ್ರಾರಂಭವಾಗಿದೆ.